ಪತ್ರಿಕಾ ಪ್ರಕಟಣೆ - PRESS RELEASE

**ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ**
**RESERVE BANK OF INDIA**

ಜಾಲತಾಣ : www.rbi.org.in
Website : www.rbi.org.in
ಇಮೇಲ್ /email : helpdoc@rbi.org.in

**ಸಂವಹನ ಇಲಾಖೆ, ಕೇಂದ್ರ ಕಚೇರಿ, ಶಾಹಿದ್ ಭಗತ್ ಸಿಂಗ್ ಮಾರ್ಗ, ಫೋರ್ಟ್, ಮುಂಬೈ-400001 ಫೋನ್/ಫೋನ್: 022- 22660502**

**Department of Communication, Central Office, Shahid Bhagat Singh Marg, Fort, Mumbai-400001 फोन/Phone: 022- 22660502**

03 ಅಕ್ಟೋಬರ್ 2025

## ಪತ್ರಿಕಾ ಪ್ರಕಟಣೆ

### ದಿ ಹಾಸನ ಜಿಲ್ಲಾ ಸಹಕಾರಿ ಕೇಂದ್ರ ಬ್ಯಾಂಕ್ ನಿಯಮಿತ, ಕರ್ನಾಟಕ - ಈ ಬ್ಯಾಂಕಿಗೆ ಆರ್ ಬಿ ಐ ವಿತ್ತೀಯ ದಂಡ ವಿಧಿಸಿದೆ

ಬ್ಯಾಂಕಿಂಗ್ ನಿಯಂತ್ರಣ ಅಧಿನಿಯಮ, 1949 (BR Act) ರ ಕಲಂ 19 ರ ಜೊತೆ ಓದಲಾದ ಕಲಂ 56 ರ ನಿಬಂಧನೆಗಳ ಉಲ್ಲಂಘನೆಗಾಗಿ ಮತ್ತು ಭಾರತೀಯ ರಿಸರ್ವ್ ಬ್ಯಾಂಕ್ 'ನಿಮ್ಮ ಗ್ರಾಹಕರನ್ನು ತಿಳಿಯಿರಿ'(ಕೆವೈಸಿ-KYC) ಕುರಿತಾಗಿ ನೀಡಿದ್ದ ಕೆಲವು ನಿರ್ದೇಶನಗಳ ಅನುಪಾಲನೆ ಮಾಡದೇ ಇದ್ದುದಕ್ಕಾಗಿ ಭಾರತೀಯ ರಿಸರ್ವ್ ಬ್ಯಾಂಕ್ (ಆರ್ ಬಿ ಐ) ತನ್ನ ಸೆಪ್ಟೆಂಬರ್ 29, 2025 ರ ಆದೇಶದ ಮೂಲಕ ದಿ ಹಾಸನ ಜಿಲ್ಲಾ ಸಹಕಾರಿ ಕೇಂದ್ರ ಬ್ಯಾಂಕ್ ನಿಯಮಿತ, ಕರ್ನಾಟಕ - ಈ ಬ್ಯಾಂಕಿಗೆ (ಬ್ಯಾಂಕು) ರೂ. 1 ಲಕ್ಷ ( ರೂ. ಒಂದು ಲಕ್ಷ ಮಾತ್ರ ) ವಿತ್ತೀಯ ದಂಡ ವಿಧಿಸಿದೆ. ಬ್ಯಾಂಕಿಂಗ್ ನಿಯಂತ್ರಣ ಅಧಿನಿಯಮ 1949 ರ ಕಲಂ 47 ಎ (1)(ಸಿ ) ಜೊತೆ ಓದಲಾದ ಕಲಂ 46(4) (i) ಮತ್ತು 56 ರ ಅಡಿಯಲ್ಲಿ ತನಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಭಾರತೀಯ ರಿಸರ್ವ್ ಬ್ಯಾಂಕ್ ಈ ದಂಡವನ್ನು ವಿಧಿಸಿದೆ.

ಮಾರ್ಚ್ 31,2024 ರಂದು ಇದ್ದ ಬ್ಯಾಂಕಿನ ಆರ್ಥಿಕ ಪರಿಸ್ಥಿತಿಯನ್ನು ಆಧರಿಸಿ ಬ್ಯಾಂಕಿನ ಶಾಸನಬದ್ಧ ನಿರೀಕ್ಷಣೆಯನ್ನು ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ (ನಬಾರ್ಡ್-NABARD) ಮಾಡಿತ್ತು. ಶಾಸನಬದ್ಧ ನಿಬಂಧನೆಗಳ ಉಲ್ಲಂಘನೆ/ ಆರ್ ಬಿ ಐ ನಿರ್ದೇಶನಗಳ ಅನುಪಾಲನೆ ಆಗದೆ ಇರುವ ಬಗ್ಗೆ ನಿರೀಕ್ಷಣಾ ನಿಷ್ಕರ್ಷೆಯನ್ನು ಮತ್ತು ಈ ಸಂಬಂಧ ನಡೆದ ಪತ್ರ ವ್ಯವಹಾರಗಳನ್ನು ಆಧರಿಸಿ ಬ್ಯಾಂಕಿಗೆ ಮೇಲೆ ಹೇಳಿದ ನಿರ್ದೇಶನಗಳ ಮತ್ತು ನಿಬಂಧನೆಗಳ ಅನುಪಾಲನೆ ಮಾಡುವಲ್ಲಿ ವಿಫಲವಾದುದಕ್ಕಾಗಿ ಏಕೆ ದಂಡ ವಿಧಿಸಬಾರದು ಎಂದು ಕಾರಣ ಕೇಳಿ ನೋಟೀಸನ್ನು ನೀಡಲಾಗಿತ್ತು. ಬ್ಯಾಂಕು ಈ ಕುರಿತು ಸಲ್ಲಿಸಿದ ಉತ್ತರ ಮತ್ತು ವೈಯಕ್ತಿಕ ವಿಚಾರಣೆಯಲ್ಲಿ ಮಾಡಲಾದ ಮೌಖಿಕ ನಿವೇದನೆಗಳನ್ನು ಪರಿಗಣಿಸಿದ ನಂತರ ಭಾರತೀಯ ರಿಸರ್ವ್

ಬ್ಯಾಂಕಿಗೆ, ಇತರ ವಿಷಯಗಳ ನಡುವೆ, ಬ್ಯಾಂಕಿನ ವಿರುದ್ಧ ಮಾಡಲಾದ ಕೆಳಕಂಡ ಆರೋಪಗಳು ಸ್ಥಿರಪಟ್ಟಿವೆ ಮತ್ತು ವಿತ್ತೀಯ ದಂಡ ವಿಧಿಸುವುದಕ್ಕೆ ಅರ್ಹವಾಗಿವೆ ಎಂದು ಗೊತ್ತಾಯಿತು:

ಬ್ಯಾಂಕು:

i. ಬ್ಯಾಂಕಿಂಗ್ ನಿಯಂತ್ರಣ ಅಧಿನಿಯಮದ ಉಲ್ಲಂಘನೆ ಮಾಡಿ ಇನ್ನೊಂದು ಸಹಕಾರಿ ಸಂಘದಲ್ಲಿ ಷೇರುಗಳನ್ನು ಹೊಂದಿತ್ತು; ಮತ್ತು

ii. ಗ್ರಾಹಕರ ಕೆ ವೈ ಸಿ ದಾಖಲೆಗಳನ್ನು ಗೊತ್ತುಪಡಿಸಿದ ಕಾಲಮಿತಿಯೊಳಗೆ ಕೇಂದ್ರೀಯ ಕೆ ವೈ ಸಿ (KYC) ದಾಖಲೆಗಳ ರಿಜಿಸ್ಟ್ರಿಗೆ (CKYCR) ಅಪ್ ಲೋಡ್ ಮಾಡಲು ವಿಫಲವಾಗಿತ್ತು.

ನಿಯಂತ್ರಣ ಅನುಪಾಲನೆಯಲ್ಲಿ ಕಂಡುಬಂದ ಕೊರತೆಗಾಗಿ ಮೇಲಿನ ಕ್ರಮವನ್ನು ತೆಗೆದುಕೊಳ್ಳಲಾಗಿದೆಯೇ ವಿನಃ ಇದು ಬ್ಯಾಂಕು ತನ್ನ ಗ್ರಾಹಕರೊಂದಿಗೆ ಮಾಡಿಕೊಂಡ ಯಾವುದೇ ವ್ಯವಹಾರ ಅಥವಾ ಒಪ್ಪಂದದ ಸಿಂಧುತ್ವದ ಬಗೆಗಿನ ಘೋಷಣೆಯಲ್ಲ. ಅಲ್ಲದೆ, ಈ ವಿತ್ತೀಯ ದಂಡ ವಿಧಿಸುವ ಕ್ರಿಯೆಯು ಭಾರತೀಯ ರಿಸರ್ವ್ ಬ್ಯಾಂಕು ಈ ಬ್ಯಾಂಕಿನ ಮೇಲೆ ತೆಗೆದುಕೊಳ್ಳಬಹುದಾದ ಯಾವುದೇ ಇತರ ಕ್ರಮದ ಪೂರ್ವಾಗ್ರಹದಿಂದ ಹೊರತಾಗಿದೆ.

**(ಬ್ರಿಜ್ ರಾಜ್)**
ಚೀಫ್ ಜನರಲ್ ಮ್ಯಾನೇಜರ್

**ಪತ್ರಿಕಾ ಪ್ರಕಟಣೆ: 2025-2026/1239**